**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ 45 ಗ್ರಾನೀಸ(2)2009

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:17.12.2013

**ಸುತ್ತೋಲೆ**

ವಿಷಯ: KTPPಯಡಿ ವಿನಾಯಿತಿ ಹೊಂದಿರುವ ರೂ.5.00ಲಕ್ಷ ಮಿತಿಯೊಳಗಿನ ಅನುಮೋದಿತ ಗ್ರಾಮೀಣ ಕುಡಿಯುವ ನೀರಿನ ಸರಬರಾಜು ಯೋಜನೆಗಳ ಕಾಮಗಾರಿಗಳಿಗೆ ಜಿಲ್ಲಾ ವೃತ್ತ ಮಟ್ಟದಲ್ಲಿಯೇ ಅನುಮೋದನೆ ನೀಡುವ ಕುರಿತು.

ಉಲ್ಲೇಖ: ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪ/45/ಗ್ರಾನೀಸ(2)2013 ದಿನಾಂಕ:25.09.2013.

--

ಇನ್ನು ಮುಂದೆ ಗ್ರಾಮೀಣ ಪ್ರದೇಶಗಳಲ್ಲಿನ ಕುಡಿಯುವ ನೀರಿನ ಯೋಜನೆಗಳ ಅನುಷ್ಠಾನವನ್ನು NRDWP ಮಾರ್ಗಸೂಚಿಗಳನ್ವಯ ಸಕ್ಷಮ ಪ್ರಾಧಿಕಾರದಿಂದ ತಾಂತ್ರಿಕ ಅನುಮೋದನೆಯಾಗಿರುವ ರೀತ್ಯಾ ಜಿಲ್ಲಾ ವೃತ್ತ ಮಟ್ಟದಲ್ಲಿಯೇ ಎಲ್ಲಾ ರೂ.5.00ಲಕ್ಷ ವ್ಯಾಪ್ತಿಯೊಳಗಿನ ತುಂಡು ಗುತ್ತಿಗೆ ಕಾಮಗಾರಿಗಳಿಗೆ ಆಯಾ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ವೃತ್ತ ಅಧೀಕ್ಷಕ ಇಂಜಿನಿಯರ್‌ರವರೆ ಅನುಮೋದನೆ ನೀಡಬಹುದಾಗಿದೆ ಎಂದು ಈ ಮೂಲಕ ಸೂಚಿಸಿದೆ. ಈ ಸಂಬಂಧ ಅನುಮೋದನೆ ನಿಮಿತ್ತ ವಿನಾಕಾರಣ ಮುಖ್ಯ ಇಂಜಿನಿಯರ್ ಪಂ.ರಾಜ್ ಇಂಜಿನಿಯರಿಂಗ್ ಇಲಾಖೆರವರಿಗೆ ಅನುಮೋದನೆಗಾಗಿ ಪ್ರಸ್ತಾವನೆ ಸಲ್ಲಿಸುವ ಅಗತ್ಯವಿರುವುದಿಲ್ಲ. ಈ ರೀತಿ ಸಂಬಂಧಪಟ್ಟ ಕ್ರಿಯಾ ಯೋಜನೆಗೆ ಅನುಮೋದನೆ ಪಡೆದಂತೆ ಅನುಷ್ಠಾನಗೊಳಿಸಿರುವ ಕಾಮಗಾರಿಗಳನ್ನು ಐಎಂಐಎಸ್‌ನಲ್ಲಿ ಅಪ್ಲೋಡ್ ಮಾಡಿರುವುದನ್ನು ಮತ್ತು ಅವುಗಳ ವಾಸ್ತವಿಕ ಅನುಷ್ಠಾನ ಮತ್ತು ಗುಣಮಟ್ಟದ ಕಾಲಕಾಲಿಕ ಪರಿವೀಕ್ಷಣೆಯ ತಪಾಸಣೆಯನ್ನು ಆಯಾ ವೃತ್ತ ಅಧೀಕ್ಷಕ ಇಂಜಿನಿಯರ್, ಪಂ.ರಾಜ್ ಇಂಜಿನಿಯರಿಂಗ್ ಇಲಾಖೆರವರು ಮಾಡತಕ್ಕದ್ದು. ಅಂತೆಯೇ, ಇವುಗಳ ಆರ್ಥಿಕ ಮತ್ತು ಭೌತಿಕ ಬಾಬ್ತಿನ ಸಂಪೂರ್ಣ ಮಾಹಿತಿಯನ್ನು ಮುಖ್ಯ ಇಂಜಿನಿಯರ್, ಪಂ.ರಾಜ್ ಇಂಜಿನಿಯರಿಂಗ್ ಇಲಾಖೆ, ಜಿಲ್ಲಾ ಪಂಚಾಯತಿ / ತಾಲ್ಲೂಕು ಪಂಚಾಯತಿ / ಗ್ರಾಮ ಪಂಚಾಯತಿಗಳಿಗೆ, ಕಾರ್ಯಪಾಲಕ ಇಂಜಿನಿಯರ್‌ರವರು ಆಸ್ತಿದಾಯಿತ್ವ ದಾಖಲೆಗಾಗಿ ಕಳುಹಿಸತಕ್ಕದ್ದೆಂದು ತಿಳಿಸಿದೆ.

17/12

(ಟಿ.ಎಂ.ವಿಜಯ ಭಾಸ್ಕರ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ:-

1. ರಾಜ್ಯದ ಎಲ್ಲಾ **(30)** ಜಿಲ್ಲಾ ಪಂಚಾಯತ್‌ಗಳ ಅಧ್ಯಕ್ಷರುಗಳು ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, 2ನೇ ಮಹಡಿ ಗ್ರಾಮೀಣಾಭಿವೃದ್ಧಿ ಭವನ ಆನಂದರಾವ್ ವೃತ್ತ ಬೆಂಗಳೂರು-09.
3. ರಾಜ್ಯದ ಎಲ್ಲಾ **(8)** ಅಧೀಕ್ಷಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತಗಳು.
4. ರಾಜ್ಯದ ಎಲ್ಲಾ **(38)** ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳು.
5. ರಾಜ್ಯದ ಎಲ್ಲಾ **(176)** ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.

...2

ಪ್ರತಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು-01.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ ವಿಧಾನಸೌಧ, ಬೆಂಗಳೂರು-01.
3. ರಾಜ್ಯದ ಎಲ್ಲಾ (30) ಜಿಲ್ಲೆಗಳ ಜಿಲ್ಲಾಧಿಕಾರಿಗಳು.
4. ಸರ್ಕಾರದ ಕಾರ್ಯದರ್ಶಿ, ಕಂದಾಯ ಇಲಾಖೆ, **(DMC)** ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು-01.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್) ಗ್ರಾಅಪಂ.ರಾಜ್ ಇಲಾಖೆ ಹಾಗೂ ಗ್ರಾಅಪಂ.ರಾಜ್ ಇಲಾಖೆಯ ಎಲ್ಲಾ ನಿರ್ದೇಶಕರುಗಳು / ಆಂತರಿಕ ಆರ್ಥಿಕ ಸಲಹೆಗಾರರು ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
6. ವಿಶೇಷಾಧಿಕಾರಿಗಳು ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ (**PWD**- ಆರ್ಥಿಕ ಕೋಶ), ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು-01.
7. ನಿರ್ದೇಶಕರು, **KRWSSA** ಮತ್ತು ಪದನಿಮಿತ್ತ ಸರ್ಕಾರದ ಅಪರ ಕಾರ್ಯದರ್ಶಿ / ನಿರ್ದೇಶಕರು (ಗ್ರಾಮ ಸ್ವರಾಜ್)/ ಆಂತರಿಕ ಆರ್ಥಿಕ ಸಲಹೆಗಾರರು, **RDPR** ಇಲಾಖೆ ಇವರುಗಳ ಆಪ್ತ ಸಹಾಯಕರು.
8. ವ್ಯವಸ್ಥಾಪಕ ನಿರ್ದೇಶಕರು, **KRIDL**, ಚಿನ್ನಸ್ವಾಮಿ ಕ್ರೀಡಾಂಗಣ, ರಾಜಭವನ ರಸ್ತೆ, ಬೆಂಗಳೂರು-01 ಇವರಿಗೆ ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ ಕೋರಿದೆ.
9. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು.